ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿಸಿ. ಸಂಖ್ಯೆ: 92/2024**

ಪ್ರ.ವ.ಬೋ.ತಾಃ 03-06-2026

ಚಾಸಾಃ 20 ಫ್ರಾಸಾಃ 10

| | |
|---|---|
| ಸಾಕ್ಷಿಯ ಹೆಸರು | ಶಿವಣ್ಣ.ಕೆ. |
| ತಂದೆ/ಗಂಡನ ಹೆಸರು | ಲೇಟ್ ಕೆಂಪಣ್ಣ |
| ವಯಸ್ಸು | 50 ವರ್ಷ |
| ವೃತ್ತಿ | ಮುಖ್ಯ ಪೇದೆ, ಮಧುಗಿರಿ ಪೊಲೀಸ್ ಠಾಣೆ |
| ವಾಸ | ಮಧುಗಿರಿ ಟೌನ್, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು ದಿಃ 01.01.2022 ರಿಂದ ಇಲ್ಲಿಯವರೆಗೆ ಮಧುಗಿರಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 29.08.2024 ರಂದು ಚಾಸಾ.23 ರವರು ಈ ಕೇಸಿಗೆ ಸಂಬಂಧಪಟ್ಟಂತೆ ಮೃತ ಲಕ್ಷ್ಮಮ್ಮರವರ ಶವ ಪಂಚನಾಮೆಯನ್ನು ಬೆರಳಚ್ಚು ಮಾಡಲು ನನ್ನನ್ನು ಮಧುಗಿರಿ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ಕರೆದುಕೊಂಡು ಹೋದರು. ಆ ಶವ ಪಂಚನಾಮೆಯನ್ನು ಚಾಸಾ.23 ರವರು ಹೇಳಿದಂತೆ ಬೆರಳಚ್ಚು ಮಾಡಿ ಪ್ರಿಂಟ್ ತೆಗೆದುಕೊಟ್ಟಿರುತ್ತೇನೆ. ಆಗ ಸಮಯ ಬೆಳಗ್ಗೆ 8.00 ರಿಂದ 10.00 ಆಗಿತ್ತು. ಆ ಶವ ಪಂಚನಾಮೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.10 ಎಂದು ಈಗಾಗಲೇ ಗುರುತಿಸಲಾಗಿದೆ. ಅದೇ ದಿನ ಚಾಸಾ.23 ರವರು ಬೆಳಗ್ಗೆ 11.30 ರಿಂದ 12.30 ಗಂಟೆಯವರೆಗೆ ಚಾಸಾ.4 ಮತ್ತು 5 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಮಾಡಿದ್ದು, ಆ ಸ್ಥಳ ಪಂಚನಾಮೆಯನ್ನು ಬೆರಳಚ್ಚು ಮಾಡಿ ಪ್ರಿಂಟ್ ತೆಗೆದು ಸಹಿ ಮಾಡಿರುತ್ತೇನೆ.

ಆ ಸ್ಥಳ ಪಂಚನಾಮೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.4 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.4(ಡಿ) ಎಂದು ಗುರುತಿಸಲಾಯಿತು. ಈ ಬಗ್ಗೆ ನಾನು ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 63(4) ರ ಅಡಿಯಲ್ಲಿ ದೃಢೀಕರಣ ಪತ್ರವನ್ನು ನೀಡಿರುತ್ತೇನೆ. ಆ ದೃಢೀಕರಣ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ17 ಎಂದು, ಸಾಕ್ಷಿಯ ಸಹಿಯನ್ನು ನಿಪಿ.17(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ– ಆರೋಪಿಯ ಪರವಾಗಿಃ ಶ್ರೀ. ಎಂ.ಸಿ.ಕೆ. ವಕೀಲರಿಂದಃ–**

ಆ ದಿನ ನನ್ನನ್ನು ಯಾವ ಕರ್ತವ್ಯಕ್ಕೆ ನೇಮಕ ಮಾಡಲಾಗಿತ್ತು ಎಂಬ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಆ ದಿನ ನಾನು ಚಾಸಾ.23 ರವರ ಜೊತೆ ಮಧುಗಿರಿ ಆಸ್ಪತ್ರೆಯ ಶವಾಗಾರಕ್ಕೆ ಹೋಗಿಲ್ಲ ಮತ್ತು ಯಾವುದೇ ಶವ ಪಂಚನಾಮೆಯನ್ನು ಬೆರಳಚ್ಚು ಮಾಡಿಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 63(4) ರ ಅಡಿಯಲ್ಲಿ ದೃಢೀಕರಣ ಪತ್ರವನ್ನು ಈ ಕೇಸಿಗೋಸ್ಕರ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನಮ್ಮ ಮೇಲಾಧಿಕಾರಿಗಳು ಸೇರಿಕೊಂಡು ಸ್ಥಳ ಪಂಚನಾಮೆಯನ್ನು ಸೃಷ್ಟಿಸಿಕೊಂಡಿದ್ದೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ